ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	703
2	ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3	ಉತ್ತರಿಸಬೇಕಾದ ಸಚಿವರು	:	ತೋಟಗಾರಿಕೆ ಹಾಗೂ ಯೋಜನೆ,ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.
4	ಉತ್ತರಿಸಬೇಕಾದ ದಿನಾಂಕ	:	17-09-2021.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಸರ್ಕಾರವು ಯಾವ ಬೆಳೆಗಳನ್ನು ತೋಟಗಾರಿಕಾ ಬೆಳೆಗಳೆಂದು ಪರಿಗಣಿಸಿದೆ; ಮಂಡ್ಯ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಉತ್ಪಾದಿಸುವ ಪ್ರದೇಶದ ವಿಸ್ತೀರ್ಣವೆಷ್ಟು; ಈ ಪ್ರದೇಶದಲ್ಲಿ ಯಾವ ಯಾವ ಬೆಳೆಗಳನ್ನು ಎಷ್ಟು ಪ್ರಮಾಣದಲ್ಲಿ ಉತ್ಪಾದಿಸಲಾಗುತ್ತಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)	ಸರ್ಕಾರವು ಎಲ್ಲಾ ರೀತಿಯ ಹಣ್ಣಿನ ಬೆಳೆಗಳು, ತರಕಾರಿ ಬೆಳೆಗಳು, ಹೂವಿನ ಬೆಳೆಗಳು, ತೋಟದ ಬೆಳೆಗಳು, ಸಾಂಬಾರು ಪದಾರ್ಥ ಬೆಳೆಗಳು, ಔಷಧೀಯ ಹಾಗೂ ಸುಗಂಧ ದ್ರವ್ಯ ಬೆಳೆಗಳನ್ನು ತೋಟಗಾರಿಕಾ ಬೆಳೆಗಳೆಂದು ಪರಿಗಣಿಸಿದೆ ಮಂಡ್ಯ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಉತ್ಪಾದಿಸುವ ಪ್ರದೇಶದ ವಿವರಗಳನ್ನು ಅನುಬಂಧ-1ರಲ್ಲಿ ಸಿದ್ಧಪಡಿಸಿ, ಸಿ.ಡಿ. ಮೂಲಕ ಒದಗಿಸಿದೆ.
ಆ)	ತೋಟಗಾರಿಕೆ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳಿಗಾಗಿ ಕಳೆದ 3 ವರ್ಷದಲ್ಲಿ ಮಂಡ್ಯ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ಮತ್ತು ಖರ್ಚಾದ ಅನುದಾನವೆಷ್ಟು; (ಈ ಯೋಜನೆಗಳ ಫಲಾನುಭವಿಗಳ ವಿವರಗಳೊಂದಿಗೆ ಯೋಜನೆವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)	ತೋಟಗಾರಿಕೆ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳನ್ನು ಹಾಗೂ ಕಳೆದ 03 ವರ್ಷದಲ್ಲಿ ಮಂಡ್ಯ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನ ಹಾಗೂ ಖರ್ಚಾದ ಅನುದಾನದ ಮಾಹಿತಿಗಳನ್ನು ಯೋಜನೆವಾರು, ಫಲಾನುಭವಿವಾರು ಹಾಗೂ ತಾಲ್ಲೂಕುವಾರು ಅನುಬಂಧ-2ರಲ್ಲಿ ಸಿದ್ಧಪಡಿಸಿ ಸಿ.ಡಿ. ಮೂಲಕ ಒದಗಿಸಿದೆ.
ಇ)	ರೈತರು ಬೆಳೆಯುತ್ತಿರುವ ತೋಟಗಾರಿಕಾ ಬೆಳೆಗಳ ಸಂರಕ್ಷಣೆಗಾಗಿ ಹಾಸನ ಜಿಲ್ಲೆಯಲ್ಲಿ ಶೀಥಲೀಕರಣ ಸಂಗ್ರಹಾಗಾರಗಳ ನಿರ್ಮಾಣ ಮಾಡಲಾಗಿದೆಯೇ (ಮಾಡಿದ್ದಲ್ಲಿ ಅವುಗಳ ವಿವರ ನೀಡುವುದು)	ರೈತರು ಬೆಳೆಯುತ್ತಿರುವ ತೋಟಗಾರಿಕೆ ಬೆಳೆಗಳ ಸಂರಕ್ಷಣೆಗಾಗಿ ಹಾಸನ ಜಿಲ್ಲೆಯಲ್ಲಿ ಒಟ್ಟು 58000 ಮೆ.ಟ. ಸಾಮರ್ಥ್ಯವುಳ್ಳ 8 ಸಂಖ್ಯೆಯ ಶೀತಲಿಕರಣ ಸಂಗ್ರಹಗಾರಗಳು ಇರುತ್ತವೆ. ವಿವರ ಅನುಬಂಧ 3ರಲ್ಲಿ ನೀಡಲಾಗಿದೆ.

ಈ)	ನಾಗಮಂಗಲದ ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರ ಕಛೇರಿ ಆವರಣದಲ್ಲಿ ಇದ್ದ ಮರಗಳನ್ನು ಕಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕಾರಣಕ್ಕೆ ಕಡಿಯಲಾಗಿದೆ ಈ ಸಂಬಂಧ ಅರಣ್ಯ ಇಲಾಖೆಯ ಅನುಮತಿ ಪಡೆಯಲಾಗಿದೆಯೇ? (ಅರಣ್ಯಾಧಿಕಾರಿಗಳ ಅನುಮತಿ ಪತ್ರ ನೀಡುವುದು)	ನಾಗಮಂಗಲ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯ ಆವರಣದಲ್ಲಿ ಇದ್ದ ಹಳೆಯ ಮಾವಿನ ಮರಗಳನ್ನು ಪುನಶ್ಚೇತನದ ಉದ್ದೇಶಕ್ಕಾಗಿ ಕತ್ತರಿಸಲಾಗಿದೆ. ಈ ಸಂಬಂಧ ಅರಣ್ಯ ಇಲಾಖೆಯ ಅನುಮತಿಗಾಗಿ ಈಗಾಗಲೇ ಪತ್ರ ವ್ಯವಹರಿಸಲಾಗಿದೆ. (ಪ್ರತಿ ಲಗತ್ತಿಸಿದೆ)

No.HORTI 379 HGM 2021

(ಮುನಿರತ್ನ)
ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.